**Bangalore**
**Regional News**
**10.04.2026 / 18.40 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಕುದುರೆಮುಖ ಕಾರ್ಖಾನೆಗೆ ಕೇಂದ್ರ ಸರ್ಕಾರದಿಂದ ೭೦೦ ಕೋಟಿ ರೂಪಾಯಿ ಬಂಡವಾಳ - ಸಚಿವ ಹೆಚ್.ಡಿ.ಕುಮಾರಸ್ವಾಮಿ

೨. ರಣ್ ಸಂವಾದ ವಿಚಾರ ಸಂಕಿರಣದಿಂದ ಬಹು ವಲಯ ಕಾರ್ಯಾಚರಣೆ ಕುರಿತ ಕ್ಷೇತ್ರ ಮಟ್ಟದ ಉಪಯುಕ್ತ ಮಾಹಿತಿ ಲಭ್ಯ - ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್

೩. ದೇಶದ ಧರ್ಮ, ಸಂಸ್ಕೃತಿ ಬಲಪಡಿಸಲು ಸಂಘಟಿತ ಪ್ರಯತ್ನ ಅಗತ್ಯ - ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್

೪. ಅಡುಗೆ ಅನಿಲ ಸಿಲಿಂಡರ್ ದಾಸ್ತಾನು ಲಭ್ಯತೆ ಮತ್ತು ವಿತರಣೆ ಕುರಿತಂತೆ ಸಚಿವ ಕೆ.ಎಚ್.ಮುನಿಯಪ್ಪ ಅವರಿಂದ ಬೆಂಗಳೂರಿನಲ್ಲಿ ಮಾಹಿತಿ

೫. ಐಪಿಎಲ್ ಟಿ-೨೦ ಕ್ರಿಕೆಟ್ ; ರಾಜಸ್ಥಾನ್ ರಾಯಲ್ಸ್ ಎದುರಿಸಲು ರಾಯಲ್ ಚಾಲೆಂಜರ್ಸ್ ಬೆಂಗಳೂರು ಸಜ್ಜು

**<><*<><>*><>**

ಕುದುರೆಮುಖ ಕಾರ್ಖಾನೆಗೆ ಕೇಂದ್ರ ಸರ್ಕಾರದಿಂದ ೭೦೦ ಕೋಟಿ ರೂಪಾಯಿ ಬಂಡವಾಳವನ್ನು ನೀಡಲಾಗುತ್ತಿದೆ ಎಂದು ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಹೆಚ್.ಡಿ.ಕುಮಾರಸ್ವಾಮಿ ತಿಳಿಸಿದ್ದಾರೆ. ಅವರು ಮೈಸೂರಿನಲ್ಲಿಂದು ಮಾಧ್ಯಮದೊಂದಿಗೆ ಮಾತನಾಡಿ, ಒಂದು ಕಾಲದಲ್ಲಿ ತುಂಬಾ ಲಾಭದಾಯಕವಾಗಿ ನಡೆಯುತ್ತಿದ್ದ ಈ ಉದ್ದಿಮೆ ರಾಜ್ಯ ಸರ್ಕಾರಕ್ಕೆ ದೊಡ್ಡಮಟ್ಟದ ತೆರಿಗೆ ನೀಡುತ್ತಿತ್ತು ಎಂದರು. ವಿಶ್ವೇಶ್ವರಯ್ಯ ಉಕ್ಕು ಸ್ಥಾವರಕ್ಕೆ ೫ ಸಾವಿರ ಕೋಟಿ ರೂಪಾಯಿ ಬಿಡುಗಡೆ ಮಾಡಿ ಪ್ರಾರಂಭ ಮಾಡಲಾಗುತ್ತಿದೆ. ಹೆಚ್ಎಂಟಿ ಯನ್ನು ಬೆಂಗಳೂರು, ಕೇರಳ, ಹೈದರಾಬಾದ್, ಉತ್ತರ ಪ್ರದೇಶ ಎಲ್ಲದರಲ್ಲೂ ಪ್ರಾರಂಭ ಮಾಡಲಾಗುವುದು ಎಂದು ಸಚಿವ ಕುಮಾರಸ್ವಾಮಿ ಹೇಳಿದರು. ಮಂಡ್ಯ ಕಾರ್ಖಾನೆಗೆ ಬಜೆಟ್‌ನಲ್ಲಿ ೧೦೦ ಕೋಟಿ ರೂಪಾಯಿ ಬಿಡುಗಡೆಯಾಗಿದ್ದು, ಈ ಬಗ್ಗೆ ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ್ ರವರ ಜೊತೆ ಕರೆ ಮಾಡಿ ಮಾಹಿತಿ ಕಲೆ ಹಾಕಲಾಗಿದೆ.

ಇದೇ ೧೩ ರಂದು ಈ ವಿಷಯಕ್ಕೆ ಸಂಬಂಧಿಸಿದಂತೆ ರಾಜ್ಯದಲ್ಲಿ ಕೈಗಾರಿಕೆ ಸ್ಥಾಪನೆ ಮಾಡುವ ನಿಟ್ಟಿನಲ್ಲಿ ಸಭೆ ಕರೆಯಲು ತೀರ್ಮಾನ ಮಾಡಲಾಗಿದೆ ಎಂದರು. ನಂತರ ಸಚಿವ ಕುಮಾರಸ್ವಾಮಿಯವರು, ಮೈಸೂರು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ದಿಶಾ ಸಭೆ ನಡೆಸಿ, ವಿವಿಧ ಅಭಿವೃದ್ಧಿ ಕಾರ್ಯಗಳ ಕುರಿತು ಸಂಬಂಧಪಟ್ಟ ಇಲಾಖೆಗಳ ಹಿರಿಯ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು. ದಿಶಾ ಸಭೆಯಲ್ಲಿ ಅಧಿಕಾರಿಗಳ ಜೊತೆ ಮೈಸೂರಿನ ಪ್ರಮುಖ ಕೇಂದ್ರ ಸರ್ಕಾರಿ ಅಭಿವೃದ್ಧಿ ಕಾರ್ಯಕ್ರಮಗಳಾದ ಫ್ಲೈಓವರ್, ಮೈಸೂರು ವಿಮಾನ ನಿಲ್ದಾಣ ವಿಸ್ತರಣೆ ಹಾಗೂ ವಿವಿಧ ಕೈಗಾರಿಕಾ ಅಭಿವೃದ್ಧಿ ಯೋಜನೆಗಳ ಬಗ್ಗೆ ಮಾಹಿತಿ ಕಲೆ ಹಾಕಿದರು.

<><*<><>*><>

ರಣ್ ಸಂವಾದ್ ವಿಚಾರ ಸಂಕಿರಣದಿಂದಾಗಿ ಬಹು ವಲಯ ಕಾರ್ಯಾಚರಣೆ ಕುರಿತ ಕ್ಷೇತ್ರ ಮಟ್ಟದ ಉಪಯುಕ್ತ ಮಾಹಿತಿ-ಜ್ಞಾನ ಪಡೆಯಲು ಸಾಧ್ಯವಾಗಿದೆ ಎಂದು ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ಹೇಳಿದ್ದಾರೆ. ವಿಚಾರ ಸಂಕಿರಣದಲ್ಲಿ ಸಮಾಪನ ಭಾಷಣ ಮಾಡಿದ ಅವರು, ಭವಿಷ್ಯದಲ್ಲಿ ಬಹುವಲಯ ಕಾರ್ಯಾಚರಣೆ ನಿರ್ವಹಿಸಲು ಸಾಮರ್ಥ್ಯ ಕಲ್ಪಿಸುವ ಕಾರ್ಯಜಾಲ, ಗುಣಮಟ್ಟದ ಕಾರ್ಯನಿರ್ವಹಣಾ ಪ್ರಕ್ರಿಯೆ, ನೀತಿ ಆಧರಿತ ವಿನ್ಯಾಸದ ಅಗತ್ಯವನ್ನು ಪ್ರತಿಪಾದಿಸಿದ್ದಾರೆ. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ, ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಅನಿಲ್ ಚೌಹಾಣ್, ಥೇಟರ್ ಕಮಾಂಡ್ ಪರಿಕಲ್ಪನೆ ಬಗ್ಗೆ ಮೂರು ಸೇವೆಗಳಲ್ಲಿ ಸಹಮತ ಇದೆ ಎಂದು ಅವರು ಹೇಳಿದರು. ರಕ್ಷಣಾ ಕ್ಷೇತ್ರದಲ್ಲಿ ಮೇಕ್ ಇನ್ ಇಂಡಿಯಾ ಉಪಕ್ರಮಗಳನ್ನು ಅವರು ಸ್ವಾಗತಿಸಿದರು.

<><*<><>*><>

ಪ್ರಪಂಚದಾದ್ಯಂತ ಅನೇಕ ರಾಷ್ಟ್ರಗಳು ಆಧ್ಯಾತ್ಮಿಕ ಮತ್ತು ಮಾನಸಿಕ ಯೋಗಕ್ಷೇಮಕ್ಕಾಗಿ ಭಾರತದತ್ತ ನೋಡುತ್ತಿವೆ ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಹೇಳಿದ್ದಾರೆ. ಅವರು, ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಇಂದು ಹನುಮಾನ್ ಗಿರಿ ದೇವಸ್ಥಾನದ ಗೋಪುರ ಮತ್ತು ಮಂಟಪ ಉದ್ಘಾಟನೆ ಕಾರ್ಯಕ್ರಮದಲ್ಲಿ ಮಾತನಾಡಿ ಭಾರತೀಯ ಸಂಸ್ಕೃತಿ ಯಾವಾಗಲು ವಿಶ್ವ ಸಹೋದರತ್ವ, ವಿಶ್ವ ಕಲ್ಯಾಣ, ಶಾಂತಿ, ಸಮಾನತೆ ಮತ್ತು ಸಾಮರಸ್ಯವನ್ನು ಪ್ರೇರೇಪಿಸುತ್ತದೆ ಎಂದರು. ದೇಶದ ಧರ್ಮ ಮತ್ತು ಸಂಸ್ಕೃತಿಯನ್ನು ಮತ್ತಷ್ಟು ಬಲಪಡಿಸಲು ಮತ್ತು ಸಂಘಟಿತ ಪ್ರಯತ್ನಗಳ ಮೂಲಕ ಲೋಕೋಪಕಾರಿ ಕೆಲಸಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ರಾಜ್ಯಪಾಲರು ಕರೆ ನೀಡಿದರು. ಸಮಾರಂಭದಲ್ಲಿ ರಾಮಚಂದ್ರಾಪುರ ಮಠದ ರಾಘವೇಶ್ವರ

ಭಾರತೀ ಸ್ವಾಮೀಜಿ, ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

<><*<><>*><>

ಕಲಬುರಗಿ ನಗರದಲ್ಲಿ ೧೧ ಕೋಟಿ ೮೬ ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿರುವ ಮೆಟ್ರಿಕ್ ನಂತರದ ಡಾ ಬಿ.ಆರ್.ಅಂಬೇಡ್ಕರ್ ಬಾಲಕ ಹಾಗೂ ಬಾಲಕಿಯರ ಹಾಸ್ಟೆಲ್‌ಅನ್ನು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಇಂದು ಲೋಕಾರ್ಪಣೆ ಮಾಡಿದರು. ತಲಾ ನೂರು ವಿದ್ಯಾರ್ಥಿ ಹಾಗೂ ವಿದ್ಯಾರ್ಥಿನಿಯರಿಗೆ ವಸತಿ ಸೌಲಭ್ಯ ಕಲ್ಪಿಸುವ ಹಾಸ್ಟೆಲ್ ಅನ್ನು ಲೋಕೋಪಯೋಗಿ ಇಲಾಖೆ ನಿರ್ಮಾಣ ಮಾಡಿದೆ. ಒಟ್ಟಾರೆ ಒಂದು ಎಕರೆ ಪ್ರದೇಶದಲ್ಲಿ ನಿರ್ಮಾಣ ಮಾಡಲಾಗಿರುವ ಬಾಲಕರ ಹಾಸ್ಟೆಲ್‌ಗೆ ೫ ಕೋಟಿ ೩೬ ಲಕ್ಷ ರೂಪಾಯಿ ಹಾಗೂ ಬಾಲಕಿಯರ ಹಾಸ್ಟೆಲ್‌ಗೆ ಆರೂವರೆ ಕೋಟಿ ರೂಪಾಯಿ ವೆಚ್ಚ ಮಾಡಲಾಗಿದೆ. ಪ್ರತ್ಯೇಕ ಕೊಠಡಿಗಳು, ಸ್ನಾನದ ಕೋಣೆಗಳು, ಶೌಚಾಲಯ, ಡೈನಿಂಗ್ ಹಾಲ್, ಚಿಕ್ಕದಾದ ಆರೋಗ್ಯ ಕೇಂದ್ರ ಸೇರಿದಂತೆ ಹಲವಾರು ಸೌಲಭ್ಯಗಳನ್ನು ಈ ಹಾಸ್ಟೆಲ್‌ಗಳು ಹೊಂದಿವೆ.

<><*<><>*><>

ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರ ಖಾತೆ ಸಚಿವ ಕೆ.ಎಚ್.ಮುನಿಯಪ್ಪ ಬೆಂಗಳೂರಿನಲ್ಲಿಂದು ಮಾಧ್ಯಮಗಳನ್ನು ಉದ್ದೇಶಿಸಿ ಮಾತನಾಡಿ, ಗ್ಯಾಸ್ ಸಿಲಿಂಡರ್ ದಾಸ್ತಾನು ಲಭ್ಯತೆ ವಿತರಣೆ ಸೇರಿದಂತೆ ಪ್ರಸಕ್ತ ಬೇಡಿಕೆ ವಿವರ ಕುರಿತು ಮಾಹಿತಿ ನೀಡಿದರು.

ಧ್ವನಿ: ಕೆ.ಎಚ್.ಮುನಿಯಪ್ಪ ( ೨೮ ಸೆಕೆಂಡ್‌ಗಳು)

ಈ ಸಂದರ್ಭದಲ್ಲಿ ಇಂಡಿಯನ್ ಆಯಿಲ್ ಕಾರ್ಪೋರೇಷನ್, ಭಾರತ್ ಪೆಟ್ರೋಲಿಯಂ ಕಾರ್ಪೋರೇಷನ್ ಮತ್ತು ಹಿಂದೂಸ್ಥಾನ್ ಪೆಟ್ರೋಲಿಯಂ ಕಾರ್ಪೋರೇಷನ್‌ನ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

<><*<><>*><>

ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳೇ ಜನರತ್ತ ಬಂದು ಅವರ ಸಮಸ್ಯೆಯನ್ನು ಆಲಿಸಿ ಅದಕ್ಕೆ ಪರಿಹಾರ ಕಲ್ಪಿಸಿ ಕೊಡುವ ನಿಟ್ಟಿನಲ್ಲಿ ಜನಸ್ಪಂದನ ಕಾರ್ಯಕ್ರಮ ರೂಪಿಸಲಾಗಿದೆ ಎಂದು ಕಂದಾಯ ಸಚಿವ ಕೃಷ್ಣಭೈರೇಗೌಡ ತಿಳಿಸಿದ್ದಾರೆ. ಅವರು, ಹಾಸನ ಜಿಲ್ಲೆಯ ಬೇಲೂರಿನಲ್ಲಿ ಇಂದು ತಾಲೂಕು ಮಟ್ಟದ ಜನ ಸ್ಪಂದನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಜನರು ತಮ್ಮ ಸಮಸ್ಯೆಗಳನ್ನು ಹೇಳಿಕೊಳ್ಳಲು ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳನ್ನು ಸಂಪರ್ಕಿಸಲು ಮಧ್ಯವರ್ತಿಗಳ ಸಹಾಯ ಪಡೆಯುತ್ತಿದ್ದರು ಆದರೆ ಈಗ ಅಧಿಕಾರಿಗಳೇ ಜನರತ್ತ ಬರುತ್ತಿರುವುದರಿಂದ ಅವರ ಸಮಸ್ಯೆಗಳನ್ನು ತಿಳಿದು ಬಗೆಹರಿಸಲು ಬಹಳ ಅನುಕೂಲಕರವಾಗಿದೆ ಎಂದರು. ಹಾಸನ ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ನಡೆದಿರುವ ಜನಸ್ಪಂದನ ಕಾರ್ಯಕ್ರಮದಲ್ಲಿ ಈ ವರೆಗೆ ಎರಡೂವರೆ ಸಾವಿರಕ್ಕೂ ಅಧಿಕ ಅರ್ಜಿಗಳು ಬಂದಿವೆ ಎಂದು ಸಚಿವ ಕೃಷ್ಣಬೈರೇಗೌಡ ತಿಳಿಸಿದರು.

**<><*<><>*><>**

ಬೆಂಗಳೂರು ಉತ್ತರ ನಗರ ಪಾಲಿಕೆ ವ್ಯಾಪ್ತಿಯಲ್ಲಿನ ನಾಗರಿಕರ ಸಮಸ್ಯೆಗಳನ್ನು ಇಂದು ನಡೆದ "ಫೋನ್-ಇನ್ ಕಾರ್ಯಕ್ರಮದಲ್ಲಿ ಆಲಿಸಿದ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ದೂರುಗಳಿಗೆ ತಕ್ಷಣ ಸ್ಪಂದಿಸಿ, ಸಮಸ್ಯೆಗಳನ್ನು ಬಗೆಹರಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು. ನಾಗರಿಕರ ಅಹವಾಲುಗಳಿಗೆ ತ್ವರಿತ ಪರಿಹಾರ ಕಲ್ಪಿಸುವ ಉದ್ದೇಶದಿಂದ ನಗರ ಪಾಲಿಕೆಯ ಆಯುಕ್ತರ ಕಚೇರಿಯ ಸಭಾಂಗಣದಲ್ಲಿ ಈ ಕಾರ್ಯಕ್ರಮ ಆಯೋಜಿಸಲಾಗಿತ್ತು.

**<><*<><>*><>**

ಕೇಂದ್ರ ಸರ್ಕಾರದ ಜನಪರ ಯೋಜನೆಗಳನ್ನು ಕಾಲಮಿತಿಯೊಳಗೆ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ, ಅರ್ಹ ಫಲಾನುಭವಿಗಳಿಗೆ ತ್ವರಿತವಾಗಿ ಸೌಲಭ್ಯಗಳು ತಲುಪುವಂತೆ ಅಧಿಕಾರಿಗಳು ಕ್ರಮ ವಹಿಸಬೇಕಿದೆ ಎಂದು ಸಂಸದ ಡಾ.ಕೆ ಸುಧಾಕರ್ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿಯ ದಿಶಾ ಸಭೆಯಲ್ಲಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲಿಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ಆಯುಷ್ಮಾನ ಭಾರತ, ಕಿಸಾನ್ ಸಮ್ಮಾನ್, ವಿಶ್ವಕರ್ಮ, ಪಿಎಂಇಜಿಪಿ ಯೋಜನೆಯಂತಹ ಸಾಕಷ್ಟು ಜನರ ಪರ ಯೋಜನೆಗಳನ್ನು ತಂದಿದೆ. ಅದರ ಸೌಲಭ್ಯಗಳು ಫಲಾನುಭವಿಗಳಿಗೆ ತಲುಪುವಂತೆ ಅಧಿಕಾರಿಗಳು ನೋಡಿಕೊಳ್ಳಬೇಕು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ೧ ಲಕ್ಷ ೬೨ ಸಾವಿರ ರೈತರು ಇದ್ದು, ಪ್ರಧಾನಮಂತ್ರಿ ಫಸಲ್ ಭೀಮಾ

ಯೋಜನೆಯಡಿ ಕಳೆದ ವರ್ಷ ಕೇವಲ ೬ ಸಾವಿರದ ೫೩ ರೈತರು ಮಾತ್ರ ನೋಂದಾಯಿಸಿಕೊಂಡಿದ್ದಾರೆ. ಜಿಲ್ಲೆಯ ರೈತರಲ್ಲಿ ಯೋಜನೆ ಕುರಿತಾಗಿ ವ್ಯಾಪಕ ಅರಿವು ಮೂಡಿಸುವ ಕಾರ್ಯಕ್ಕೆ ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಮುಂದಾಗಬೇಕು ಎಂದು ಸೂಚಿಸಿದರು.

<><*<><>*><>

<u>ಸಂಕ್ಷಿಪ್ತ ಸುದ್ದಿಗಳು</u>

೧. ವಿಜಯನಗರ ಜಿಲ್ಲೆಯಲ್ಲಿ ನಡೆಯುತ್ತಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳು ಮತ್ತು ನೀರು ಸರಬರಾಜು ಯೋಜನೆಗಳನ್ನು ನಿಗದಿತ ಸಮಯದೊಳಗೆ ಪೂರ್ಣಗೊಳಿಸಿ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕು. ಯಾವುದೇ ಕಾರಣಕ್ಕೂ ತಾಂತ್ರಿಕ ನೆಪವೊಡ್ಡಿ ವಿಳಂಬ ಮಾಡಬಾರದು ಎಂದು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಕೆ. ಜಿ ಜಗದೀಶ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

೨. ಪೂರ್ವ ಮುಂಗಾರು ಮಳೆ ಪ್ರಾರಂಭವಾಗುತ್ತಿರುವ ಹಿನ್ನೆಲೆಯಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯ ವಿವಿಧ ಪ್ರದೇಶಗಳಿಗೆ ನಗರಾಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ತುಷಾರ್ ಗಿರಿನಾಥ್, ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಇಂದು ಭೇಟಿ ನೀಡಿ ಪರಿಶೀಲನೆ ನಡೆಸಿದರು.

<><*<><>*><>

ಗುವಾಹಟಿಯಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ತಂಡ ಎದುರಿಸಲು ರಾಯಲ್ ಚಾಲೆಂಜರ್ಸ್ ಬೆಂಗಳೂರು ಸಜ್ಜಾಗಿದೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ಎರಡೂ ತಂಡಗಳು ಇದುವರೆಗೆ ಆಡಿರುವ ಎಲ್ಲ ಪಂದ್ಯಗಳನ್ನು ಗೆದ್ದಿರುವ ಹಿನ್ನೆಲೆಯಲ್ಲಿ ಇಂದಿನ ಮುಖಾಮುಖಿ ರೋಚಕವೆನಿಸಿದೆ. ಆಡಿರುವ ಎರಡೂ ಪಂದ್ಯಗಳನ್ನು ಗೆದ್ದಿರುವ ಆರ್‌ಸಿಬಿ ೪ ಅಂಕಗಳನ್ನು ಗಳಿಸಿದೆ. ರಾಜಸ್ಥಾನ್ ರಾಯಲ್ಸ್ ತಂಡ ಇದುವರೆಗೆ ಆಡಿದ ಮೂರೂ ಪಂದ್ಯಗಳಲ್ಲಿ ಜಯ ಸಾಧಿಸಿ ೬ ಅಂಕಗಳನ್ನು ಗಳಿಸಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>